ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಅಂಕೋಲಾ
ಸಿಸಿ ನಂಬರ. 637/2022

ಸಿ ಡಬ್ಲ್ಯೂ-5
ಪಿ ಡಬ್ಲ್ಯೂ-3

ದಿಃ 26-10-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಸಾಕ್ಷಿಯ ಹೆಸರುಃ ಪುಷ್ಪಾ ನಾಯ್ಕ
ಗಂಡನ ಹೆಸರುಃ ಅಶೋಕ ನಾಯ್ಕ
ವಯಸ್ಸುಃ 50 ವರ್ಷ
ಉದ್ಯೋಗಃ ಮನೆಕೆಲಸ
ವಿಳಾಸಃ ಮಂಜಗುಣಿ, ಅಂಕೋಲಾ.

ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದಃ

(Accused No.3 is absent. Since there is no dispute, hence, with the consent of counsel for accused, the evidence has been recorded.)

ಚಾಸಾ-6 ರವರ ಪರಿಚಯವಿರುತ್ತದೆ. ಚಾಸಾ-7 ಮತ್ತು 8 ರವರ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಮಾಹಿತಿ ಇರುವುದಿಲ್ಲ. ಯಾವ ವಿಷಯಕ್ಕಾಗಿ ಸಾಕ್ಷಿ ಹೇಳಲು ಬಂದಿರುತ್ತೇನೆ ಎಂದು ಗೊತ್ತಿರುವುದಿಲ್ಲ. 2-3 ವರ್ಷಗಳ ಹಿಂದೆ ಮಂಜಗುಣಿಯಲ್ಲಿ ಪೊಲೀಸರಿ ಹೇಳಿಕೆಯ ಮೇರೆಗೆ ಸಹಿಯನ್ನು ಹಾಕಿರುತ್ತೇನೆ. ಯಾವ ವಿಚಾರಕ್ಕಾಗಿ ಸಹಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿರುವುದಿಲ್ಲ. ಪೊಲೀಸರೂ

ಸಹ ಹೇಳಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ 1 ಮತ್ತು 2 ನೇ ಆರೋಪಿತರನ್ನು ಸಾಕ್ಷಿಯು ಗುರುತಿಸುವಲ್ಲಿ ವಿಫಲರಾಗಿರುತ್ತಾರೆ. ಮುದ್ದೆ ಮಾಲುಗಳನ್ನು ಗುರುತಿಸುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ. ಇವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಅನುಮತಿಸಲಾಯಿತು.)

ಪಾಟಿ ಸವಾಲುಃ ಮಾನ್ಯ ಎ.ಪಿ.ಪಿ.ಯವರಿಂದ

ದಿಃ 28-05-2021 ರಂದು ಬೆಳಿಗ್ಗೆ 7.15 ಗಂಟೆಗೆ ನೀವು ನಿಮ್ಮ ಮನೆಯ ಹತ್ತಿರ ಟಾಟ ಏಸ್ ವಾಹನ ನಿಂತಿದ್ದನ್ನು ನೋಡಲು ಹೋಗಿರುತ್ತೀರಿ ಎಂದರೆ ಸರಿಯಲ್ಲ. ಅಲ್ಲಿ ಚಾಸಾ-1 ಮತ್ತು 4 ರವರು ನಿಮ್ಮ ಊರಿನಿಂದ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಸಾಗಾಟ ಮಾಡುತ್ತಿದ್ದಾರೆ ಎಂದು ಹೇಳಿರುತ್ತಾರೆ ಎಂದರೆ ಸರಿಯಲ್ಲ. ನೀವು ಅಲ್ಲಿ ಹೋಗಿ ನೋಡಿದಾಗ ಟಾಟಾ ಏಸ್ ವಾಹನದಲ್ಲಿ ಒಟ್ಟು 29 ಅಕ್ಕಿ ಚೀಲಗಳು ಇದ್ದವು ಎಂದರೆ ಗೊತ್ತಿರುವುದಿಲ್ಲ. ಒಟ್ಟು 8-9 ಕ್ವಿಂಟಲ್ ಇದ್ದವು ಎಂದರೆ ಗೊತ್ತಿರುವುದಿಲ್ಲ. ಸದರಿ ಟಾಟ ಏಸ್ ವಾಹನ ಸಂಖ್ಯೆ ಕೆ ಎ 30 ಎ 0066 ಆಗಿತ್ತು ಎಂದರೆ ಸರಿಯಲ್ಲ. ಈ ವಿಷಯಕ್ಕೆ ಸಂಬಂಧಪಟ್ಟು ನಾನು ಪೊಲೀಸರ ಮುಂದೆ ಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ನಂತರ ದಿಃ13-09-2021 ರಂದು ಲೇಖಾ ನಾಗಪ್ಪ ನಾಯಕ ಇವರನ್ನು ನೀವು ಪೊಲೀಸ್ ಠಾಣೆಯಲ್ಲಿ ನೋಡಿರುತ್ತೀರಿ ಎಂದರೆ ಸರಿಯಲ್ಲ. ದಿಃ20-09-2021 ರಂದು

ಆನಂದು ಕೃಷ್ಣ ಶೆಟ್ಟಿ ಇವರನ್ನು ನೋಡಿರುತ್ತೇನೆ ಎಂದರೆ ಸರಿಯಲ್ಲ. ದಿಃ11-11-2021 ರಂದು 2ನೇ ಆರೋಪಿಯ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಟಾಟಾ ಏಸ್ ವಾಹನವನ್ನು ಬಿಟ್ಟು ಓಡಿ ಹೋಗಿದ್ದರ ಬಗ್ಗೆ ಮರುಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಮರು ಹೇಳಿಕೆಯನ್ನು ನಿಪಿ-10 ಎಂದು ಗುರುತಿಸಲಾಯಿತು. ನಿಮಗೆ ಈ ಪ್ರಕರಣದ ಸಂಪೂರ್ಣ ಮಾಹಿತಿ ಇದ್ದರೂ ಸಹ, ಆರೋಪಿತರನ್ನು ಹಾಗೂ ಮದ್ದೆ ಮಾಲುಗಳನ್ನು ಗುರುತಿಸಿದ್ದರೂ ಸಹ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ ಎಂದು ತಿಳಿರುತ್ತಾರೆ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ).

ಓ ಹೇ ಕೇ ಸರಿ ಇದೆ

ಹೆಚ್ಚುವರಿ ಜೆ.ಎಂ.ಎಫ್.ಸಿ., ಅಂಕೋಲಾ.